# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (24) 22
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 08-12-2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನ್ಯಾಸಕರಿಗೆ ನಿಗಧಿಪಡಿಸಿರುವ ವಿದ್ಯಾರ್ಹತೆ ಏನು; ಮತ್ತು ಉಪನ್ಯಾಸಕರು ಯಾವ ತರಗತಿಗಳಿಗೆ ಭೋಧನೆ ಮಾಡುತ್ತಿದ್ದಾರೆ; (ಸಂಪೂರ್ಣವಾದ ಮಾಹಿತಿ ನೀಡುವುದು). | ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಉಪನ್ಯಾಸಕರ ನೇಮಕಾತಿಗೆ ಅಧಿಸೂಚಿತ ವಿಷಯಗಳ ಸ್ನಾತಕೋತ್ತರ ಪದವಿಯಲ್ಲಿ ಶೇಕಡ 55 ಅಂಕಗಳೊಂದಿಗೆ ಬಿ.ಇಡಿ. ಪದವಿಯನ್ನು ಹೊಂದಿರಬೇಕು ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಅಧಿಸೂಚಿತ ವಿಷಯಗಳ ಸ್ನಾತಕೋತ್ತರ ಪದವಿಯಲ್ಲಿ ಶೇಕಡ 50 ಅಂಕಗಳೊಂದಿಗೆ ಬಿ.ಇಡಿ ಪದವಿಯನ್ನು ಹೊಂದಿರಬೇಕು.<br><br>ಪ್ರಸ್ತುತ ಈ ನಿಯಮಗಳ ಅನುಸಾರ ನೇಮಕಾತಿ ಹೊಂದಿದ ಉಪನ್ಯಾಸಕರು ಪದವಿ ಪೂರ್ವ ತರಗತಿಗಳಿಗೆ ಬೋಧನೆ ಮಾಡುತ್ತಿದ್ದಾರೆ. |
| (ಆ) | ಪ್ರಸ್ತುತ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಹೊಸ ತಿದ್ದುಪಡಿ ತರಲಾಗುತ್ತಿದೆಯೇ; ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತಂದು ಪದವಿ ಪೂರ್ವ ಉಪನ್ಯಾಸಕರಿಂದ 9 ಮತ್ತು 10ನೇ ತರಗತಿಗಳಿಗೆ ಬೋಧನೆ ಮಾಡಲು ಅವಕಾಶ ನೀಡಿದರೆ ಶಿಕ್ಷಣದ ಶಿಸ್ತು ಆಡಳಿತಾತ್ಮಕ ಹಕ್ಕುಗಳು ಹಾಗೂ ಇಲಾಖೆಯ ಸ್ವಾತಂತ್ರ್ಯಕ್ಕೆ ಧಕ್ಕೆಯಾಗುವುದಿಲ್ಲವೇ; (ಸಂಪೂರ್ಣ ಮಾಹಿತಿ ನೀಡುವುದು) | ಉಪನ್ಯಾಸಕರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ 9ನೇ ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಬೋಧನೆ ಮಾಡಬೇಕೆಂಬುದರ ಬಗ್ಗೆ ಪರಿಶೀಲನಾ ಹಂತದಲ್ಲಿದ್ದು, ಈ ಬಗ್ಗೆ ಸಾಧಕ ಬಾಧಕಗಳ ಕುರಿತು ಕೂಲಂಕಷವಾಗಿ ಪರಿಶೀಲಿಸಿ ನಂತರ ಕ್ರಮವಹಿಸಲಾಗುವುದು. |
| ಇ) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳ ಸ್ಥಿತಿಗತಿಗಳ ಮಾಹಿತಿ ಸಂಗ್ರಹಿಸಲು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳಲ್ಲಿ (DIET) ಹಿರಿಯ ಉಪನ್ಯಾಸಕರ ಮೂಲಕ ನಡೆಸಲು ಜಂಟಿ ಸುತ್ತೋಲೆ ಹೊರಡಿಸಲು ಕಾರಣವೇನು; | • ರಾಜ್ಯದಲ್ಲಿ ಒಟ್ಟು 1319 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿದ್ದು ಬೋಧನಾ ಕಲಿಕಾ ಚಟುವಟಿಕೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಸಂಬಂಧ ಮಾಹಿತಿ ಸಂಗ್ರಹಣೆಯ ಅವಶ್ಯಕತೆ ಇರುತ್ತದೆ.<br>• ಪದವಿ ಪೂರ್ವ ಶಿಕ್ಷಣ ಹಂತದಲ್ಲಿ ಶೈಕ್ಷಣಿಕ ಚಟುವಟಿಕೆಗಳ ಅಂದರೆ ಬೋಧನಾ-ಕಲಿಕಾ ಪ್ರಕ್ರಿಯೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ತಾಲೂಕು ಹಂತದಲ್ಲಿ |

| | | |
|---|---|---|
| | | ವಿಭಾಗೀಯ ಹಂತದಲ್ಲಿ ಅಧಿಕಾರಿಗಳ ಕೊರತೆ ಇರುವ ಕಾರಣ, ಶಾಲಾ ಶಿಕ್ಷಣ ಇಲಾಖೆಯ ಅಂಗಸಂಸ್ಥೆಯಾದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (DIET) ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ಉಪನ್ಯಾಸಕರಿಂದ ಮಾಹಿತಿಯನ್ನು ಸಂಗ್ರಹಿಸುವ ಸಲುವಾಗಿ ಜಂಟಿ ಸುತ್ತೋಲೆ ಹೊರಡಿಸಲಾಗಿದೆ.<br>• ಪರೀಕ್ಷಾ ಫಲಿತಾಂಶ ಸುಧಾರಣೆ: ಪರಿಹಾರಾತ್ಮಕ ತರಗತಿಗಳನ್ನು ಶಿಸ್ತುಬದ್ಧವಾಗಿ ತೆಗೆದುಕೊಳ್ಳುವುದರಿಂದ, ಮಾದರಿ ಪ್ರಶ್ನೆಪತ್ರಿಕೆಗಳು, ಪ್ರಶ್ನೆಕೋಠಿ ಮತ್ತು ನೀಲನಕ್ಷೆಯ ನೀಡುವುದರಿಂದ ಫಲಿತಾಂಶ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ಸುಧಾರಣೆಯಾಗುವುದು ಎಂಬ ಅಂಶಗಳ ಹಿನ್ನಲೆಯಲ್ಲಿ ಮಾಹಿತಿ ಸಂಗ್ರಹಿಸಲಾಗುತ್ತಿದೆ.<br>• ದಾಖಲಾತಿ ಹೆಚ್ಚಿಸುವ ಸಲುವಾಗಿ: ಪೋಷಕ ಶಿಕ್ಷಕರ ಸಭೆಯನ್ನು ಕರೆದಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ. |
| ಈ) | ಉಪನ್ಯಾಸಕರಿಗೆ ಪದವಿ ಪೂರ್ವ ಪಠ್ಯ ಕ್ರಮದ ವೈಜ್ಞಾನಿಕ ಹಿನ್ನಲೆ, ಎನ್.ಸಿ.ಇ.ಆರ್.ಟಿ (NCERT) ಆಧಾರಿತ ವಿಷಯದ ವ್ಯಾಪ್ತಿ ಹಾಗೂ ಆಳವಾದ ಅರಿವು ಇದೆಯೇ; DIET 25 ಉಪನ್ಯಾಸಕರು ಪದವಿ ಪೂರ್ವ ಮಟ್ಟದ ಉಪನ್ಯಾಸಕರ ಬೋಧನೆ, ಪ್ರಾಯೋಗಿಕತೆ ಹಾಗೂ ಪಠ್ಯ ಮೌಲ್ಯವನ್ನು ಹೇಗೆ ಮಾಹಿತಿ ಸಂಗ್ರಹಿಸಬಲ್ಲರು? (ಪೂರ್ಣ ಮಾಹಿತಿ ನೀಡುವುದು) | • ಶೈಕ್ಷಣಿಕ ಚಟುವಟಿಕೆಗಳ ಪ್ರಶ್ನಾವಳಿಗಳಿಗೆ ಸಂಬಂಧಿಸಿದಂತೆ ಹೌದು / ಇಲ್ಲ ಹಾಗೂ ಸಂಕ್ಷಿಪ್ತ ಮಾಹಿತಿಯನ್ನು ಮಾತ್ರ ಸಂಗ್ರಹಿಸಲು ತಿಳಿಸಿರುವುದರಿಂದ ಎನ್.ಸಿ.ಇ.ಆರ್.ಟಿ. (NCERT) ಆಧಾರಿತ ವಿಷಯದ ವ್ಯಾಪ್ತಿ ಹಾಗೂ ಆಳವಾದ ಅರಿವಿನ ಅಗತ್ಯವಿರುವುದಿಲ್ಲ.<br>• ಮಾಹಿತಿಯನ್ನು ಸಂಗ್ರಹಿಸಲು ಸಿದ್ಧಪಡಿಸಿರುವ ನಮೂನೆಯಂತೆ ಮಾಹಿತಿಯನ್ನು ಸಂಗ್ರಹಿಸುವರು ಹಾಗೂ ಶೈಕ್ಷಣಿಕ ಚಟುವಟಿಕೆಗಳ ಪ್ರಶ್ನಾವಳಿಗಳಿಗೆ ಸಂಬಂಧಿಸಿದಂತೆ ಹೌದು / ಇಲ್ಲ ಹಾಗೂ ಸಂಕ್ಷಿಪ್ತ ಮಾಹಿತಿಯನ್ನು ಮಾತ್ರ ಸಂಗ್ರಹಿಸಲಾಗುವುದು. |

ಸಂಖ್ಯೆ: ಇಪಿ 378 ಡಿಜಿಡಬ್ಲೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು